# ಕರ್ನಾಟಕ ಸರ್ಕಾರ
# ಸಮಾಜ ಕಲ್ಯಾಣ ಇಲಾಖೆ

ಸಂಖ್ಯೆ : ಸಕಇ/ಪಪೂತಕೇ/ಎಸ್-5/ ಸಿಆರ್-04/2023-24

ಅಪರ ನಿರ್ದೇಶಕರ ಕಛೇರಿ
ಪರೀಕ್ಷಾ ಪೂರ್ವತರಬೇತಿ ಕೇಂದ್ರ,
ಡಾ|| ಬಿ.ಆರ್.ಅಂಬೇಡ್ಕರ್ ಭವನ
ವಸಂತನಗರ, ಬೆಂಗಳೂರು.
ದಿನಾಂಕ : 03.11.2023

## ಅಧಿಸೂಚನೆ

ವಿಷಯ: 2023-24ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖೆಯ ಪರೀಕ್ಷಾ ಪೂರ್ವ ತರಬೇತಿ ಕೇಂದ್ರದ ಮೂಲಕ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಗಳ ಅಭ್ಯರ್ಥಿಗಳಿಗೆ ಯು.ಪಿ.ಎಸ್.ಸಿ / ಕೆ.ಎ.ಎಸ್ / ಗ್ರೂಪ್ –ಸಿ / ಬ್ಯಾಂಕಿಂಗ್ / ಎಸ್.ಎಸ್.ಸಿ / ಆರ್.ಆರ್.ಬಿ ಮತ್ತು ನ್ಯಾಯಾಂಗ ಸೇವಾ ಪರೀಕ್ಷೆಗಳ ಪೂರ್ವಭಾವಿ ತರಬೇತಿಗೆ ಆಯ್ಕೆ ಮಾಡುವ ಸಂಬಂಧ ಅರ್ಹ ಅಭ್ಯರ್ಥಿಗಳಿಂದ ಆನ್-ಲೈನ್ ಮೂಲಕ ಅರ್ಜಿ ಆಹ್ವಾನಿಸುವ ಬಗ್ಗೆ.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2023-24ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖೆಯ ಪರೀಕ್ಷಾ ಪೂರ್ವ ತರಬೇತಿ ಕೇಂದ್ರದ ಮೂಲಕ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಗಳ ಅಭ್ಯರ್ಥಿಗಳಿಗೆ ಯು.ಪಿ.ಎಸ್.ಸಿ / ಕೆ.ಎ.ಎಸ್ / ಗ್ರೂಪ್ -ಸಿ / ಬ್ಯಾಂಕಿಂಗ್ / ಎಸ್.ಎಸ್.ಸಿ / ಆರ್.ಆರ್.ಬಿ ಮತ್ತು ನ್ಯಾಯಾಂಗ ಸೇವಾ ಪರೀಕ್ಷೆಗಳಿಗೆ ಪೂರ್ವಭಾವಿ ತರಬೇತಿ ನೀಡಲು ಉದ್ದೇಶಿಸಲಾಗಿದೆ.

ಯು.ಪಿ.ಎಸ್.ಸಿ / ಕೆ.ಎ.ಎಸ್ / ಗ್ರೂಪ್ –ಸಿ / ಬ್ಯಾಂಕಿಂಗ್ / ಎಸ್.ಎಸ್.ಸಿ / ಆರ್.ಆರ್.ಬಿ ಮತ್ತು ನ್ಯಾಯಾಂಗ ಸೇವಾ ಪರೀಕ್ಷೆಗಳ ಪೂರ್ವಭಾವಿ ತರಬೇತಿಗೆ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಗಳ ಅಭ್ಯರ್ಥಿಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರ (K.E.A) Karnataka Examination Authority ರವರ ಮೂಲಕ ಸಾಮಾನ್ಯ ಪ್ರವೇಶ ನಡೆಸಿ ಪ್ರವೇಶ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ನಿಗಧಿತ ಗುರಿಗನುಗುಣವಾಗಿ ಆಯ್ಕೆ ಮಾಡಲಾಗುತ್ತದೆ. ಸದರಿ ಅಭ್ಯರ್ಥಿಗಳಿಗೆ ಶಿಷ್ಯ ವೇತನವನ್ನು ಸರ್ಕಾರದಿಂದ ಮಂಜೂರಾದ ದರದಲ್ಲಿ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ವರ್ಗಾಯಿಸಲಾಗುವುದು ಮತ್ತು ತರಬೇತಿ ವೆಚ್ಚವನ್ನು ತರಬೇತಿ ಸಂಸ್ಥೆಗಳಿಗೆ ಪಾವತಿಸಲಾಗುವುದು.

ಯು.ಪಿ.ಎಸ್.ಸಿ / ಕೆ.ಎ.ಎಸ್ / ಗ್ರೂಪ್ –ಸಿ / ಬ್ಯಾಂಕಿಂಗ್ / ಎಸ್.ಎಸ್.ಸಿ / ಆರ್.ಆರ್.ಬಿ ಮತ್ತು ನ್ಯಾಯಾಂಗ ಸೇವಾ ಪರೀಕ್ಷೆಗಳ ಪೂರ್ವಭಾವಿ ತರಬೇತಿಯ ಅವಧಿ, ಶೈಕ್ಷಣಿಕ ವಿದ್ಯಾರ್ಹತೆ, ಅರ್ಜಿ ಸಲ್ಲಿಸಬೇಕಾದ ವೆಬ್ ಸೈಟ್ ವಿಳಾಸ ಮತ್ತು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದ ವಿವರಗಳು ಈ ಕೆಳಕಂಡಂತಿದೆ.

| ಕ್ರ ಸಂ | ವಿವರ | |
|---|---|---|
| 01 | **ಕೋರ್ಸ್ ಗಳ ವಿವರ ತರಬೇತಿ ಅವಧಿ (ತಿಂಗಳು)** | ಯು.ಪಿ.ಎಸ್.ಸಿ - 6 months for prelims and 3 months for mains (Those who have cleared prelims and eligible for mains examinations). / ಕೆ.ಎ.ಎಸ್ / ಬ್ಯಾಂಕಿಂಗ್ / ಗ್ರೂಪ್ -ಸಿ / ಎಸ್.ಎಸ್.ಸಿ / ಮತ್ತು ಆರ್.ಆರ್.ಬಿ / ನ್ಯಾಯಾಂಗ ಸೇವೆ ಪರೀಕ್ಷೆಗಳಿಗೆ – 3 Months. |
| 02 | **ವಯಸ್ಸು** | 18 ರಿಂದ 40 ವರ್ಷ |
| 03 | **ಕೋರ್ಸ್ ಗಳ ವಿವರ** | **ಯು.ಪಿ.ಎಸ್.ಸಿ :-** ಕೇಂದ್ರ ಲೋಕಸೇವಾ ಆಯೋಗ ಪ್ರತಿ ವರ್ಷ ಐ.ಎ.ಎಸ್, ಐ.ಎಫ್.ಎಸ್, ಐ.ಪಿ.ಎಸ್, ಐ.ಆರ್.ಎಸ್ ಮೊದಲಾದ 23 ವಿವಿಧ ಸೇವೆಗಳ ಹುದ್ದೆಗಳ ಪರೀಕ್ಷೆಗೆ ತರಬೇತಿ<br>**ಕೆ.ಎ.ಎಸ್ :-** ಕರ್ನಾಟಕ ಲೋಕಸೇವಾ ಆಯೋಗ ಕಾಲಕಾಲಕ್ಕೆ ಗೆಜೆಟೆಡ್ ಪ್ರೊಬೇಷನರಿ ಆಫೀಸರ್ ಹುದ್ದೆಗಳ ಪರೀಕ್ಷೆಗೆ ತರಬೇತಿ.<br>**ಆರ್.ಆರ್.ಬಿ :-** ರೈಲ್ವೆ ನೇಮಕಾತಿ ಮಂಡಳಿ, ಪ್ರತಿ ವರ್ಷ ನಡೆಸುವ ಜೂನಿಯರ್ ಕ್ಲರ್ಕ್ ಅಕೌಂಟ್ಸ್ ಕ್ಲರ್ಕ್ ಕಂ ಟೈಪಿಸ್ಟ್ ಜೂನಿಯರ್ ಟೈಮ್ ಕೀಪರ್, ಟ್ರೈನ್ ಕ್ಲರ್ಕ್, ರೈಲ್ವೆ ಪೋಲೀಸ್ ಮತ್ತು ಉಪ ನೀರಿಕ್ಷಕರ ಹುದ್ದೆಗಳ ಪರೀಕ್ಷೆಗೆ ತರಬೇತಿ.<br>**ಐ.ಬಿ.ಪಿ.ಎಸ್ (ಬ್ಯಾಂಕಿಂಗ್) :-** Institute of Banking Personnel Selection ವತಿಯಿಂದ ಪ್ರತಿ ವರ್ಷ Probationary Officer/Management Trainee, Specialist Officer, Regional Rural Bank's Group-A&B Officer & Clerks ಮೊದಲಾದ ಹುದ್ದೆಗಳಿಗೆ ಪರೀಕ್ಷೆಗೆ ತರಬೇತಿ.<br>**ಎಸ್.ಎಸ್.ಸಿ :-** Staff Selection Commission ಪ್ರತಿ ವರ್ಷ ನಡೆಸುವ ವಿವಿಧ ಹುದ್ದೆಗಳ ಪರೀಕ್ಷೆ ತರಬೇತಿ.<br>**ಗ್ರೂಪ್-ಸಿ :-** ಕರ್ನಾಟಕ ಲೋಕಸೇವಾ ಆಯೋಗ ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಪೋಲೀಸ್ ನೇಮಕಾತಿ ಪ್ರಾಧಿಕಾರ, ಕರ್ನಾಟಕ ನ್ಯಾಯಾಂಗ ನೇಮಕಾತಿ ಪ್ರಾಧಿಕಾರಗಳು ನಡೆಸುವ ವಿವಿಧ ಹುದ್ದೆಗಳ ಪರೀಕ್ಷೆಗಳಿಗೆ ತರಬೇತಿ.<br>**ನ್ಯಾಯಾಂಗ ಸೇವೆ :-** Civil/District judge, Law Officer, Pleader ಮೊದಲಾದ ಹುದ್ದೆಗಳ ಪರೀಕ್ಷೆಗಳಿಗೆ ತರಬೇತಿ.<br>**ಮೇಲ್ಕಂಡ ವಿವಿಧ ತರಬೇತಿಗಳಿಗೆ ಪದವಿಯಲ್ಲಿ ಉತ್ತೀರ್ಣರಾಗಿರುವ ಮತ್ತು ಅಂತಿಮ ಸೆಮಿಸ್ಟರ್ ನಲ್ಲಿ ವ್ಯಾಸಂಗ ಮಾಡುತ್ತಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಿದ್ದು, ಆಯ್ಕೆ ಪ್ರಕ್ರಿಯ** |

| | | | |
|---|---|---|---|
| | | **ಹಂತದಲ್ಲಿ ಪದವಿ ವ್ಯಾಸಂಗ ಪೂರ್ಣ ಮುಕ್ತಾಯಗೊಳಿಸಿರುವ ಬಗ್ಗೆ ಅಧಿಕೃತ ದಾಖಲೆಗಳನ್ನು ಹೊಂದಿರಬೇಕು.** | |
| 04 | **ಅಭ್ಯರ್ಥಿಯ ಸಾಮಾನ್ಯ ಅರ್ಹತೆ** | 1. ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು;<br>2. ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ನಿಗಧಿತ ನಮೂನೆಯಲ್ಲಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಪಡೆದಿರಬೇಕು.<br>3. ದೈಹಿಕ ಅಂಗವಿಕಲ ಮೀಸಲಾತಿಯಡಿ ಅರ್ಜಿ ಸಲ್ಲಿಸುವ ಅಭ್ಯರ್ಥಿ, ನಿಗಧಿತ ಪ್ರಾಧಿಕಾರದಿಂದ ನಿಗಧಿಪಡಿಸಲಾದ ಕೊನೆಯ ದಿನಾಂಕದೊಳಗೆ ಅಂಗವಿಕಲ ಪ್ರಮಾಣ ಪತ್ರ ಪಡೆದಿರಬೇಕು.<br>ವಿದ್ಯಾರ್ಥಿನಿಲಯ / ಕ್ರೈಸ್ ವಿದ್ಯಾರ್ಥಿನಿಲಯ / ಸಫಾಯಿ ಕರ್ಮಚಾರಿ ಮೀಸಲಾತಿ ಅಡಿ ಅರ್ಜಿ ಸಲ್ಲಿಸುವ ಅಭ್ಯರ್ಥಿ ನಿಗಧಿತ ನಮೂನೆಯಲ್ಲಿ ಪ್ರಮಾಣ ಪತ್ರ ಪಡೆದಿರಬೇಕು. | |
| 05 | **ವಾರ್ಷಿಕ ಆದಾಯ** | ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ ರೂ. **5.00** ಲಕ್ಷ ಮೀರಿರಬಾರದು. | |
| 06 | **ಆಯ್ಕೆ ವಿಧಾನ** | • ಅಭ್ಯರ್ಥಿಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರ (KEA) ರವರು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುತ್ತದೆ.<br>• ಸಾಮಾನ್ಯ ಪ್ರವೇಶ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಮೆರಿಟ್ ಆಧಾರದ ಮೇಲೆ ಆನ್-ಲೈನ್ ಕೌನ್ಸಿಲಿಂಗ್ ಮೂಲಕ ಅಭ್ಯರ್ಥಿಗಳನ್ನು ತರಬೇತಿ ಸಂಸ್ಥೆಗೆ ನಿಯೋಜಿಸಲಾಗುತ್ತದೆ. | |
| 07 | **ಶಿಷ್ಯವೇತನ (ಮಾಸಿಕ)** | **ಯು.ಪಿ.ಎಸ್.ಸಿ ತರಬೇತಿ**<br>ದೆಹಲಿ - ರೂ 10,000/-<br>ಹೈದರಾಬಾದ್ – ರೂ 8,000/-<br>ಬೆಂಗಳೂರು – ರೂ 6,000/-<br>ಇತರೆ ಸ್ಥಳಗಳು - ರೂ 5,000/- | ಕೆ.ಎ.ಎಸ್ - ರೂ 5,000/-<br>ಬ್ಯಾಂಕಿಂಗ್ / ಗ್ರೂಪ್-ಸಿ / ಎಸ್.ಎಸ್.ಸಿ / ಆರ್. ಆರ್. ಬಿ / ನ್ಯಾಯಾಂಗ ಸೇವೆ ತರಬೇತಿ – 5,000/- |
| ಬಯೋಮೆಟ್ರಿಕ್ ಶಿಷ್ಯವೇತನವನ್ನು ಪ್ರತಿ ಮಾಹೆ ತರಬೇತಿ ಸಂಸ್ಥೆಯವರು ಸಲ್ಲಿಸುವ ಹಾಜರಾತಿಯನ್ವಯ ಪಾವತಿಸಲಾಗುವುದು. ಆದರೆ ತರಬೇತಿ ಅವಧಿಯಲ್ಲಿ ಯಾವುದೇ ವಸತಿ ಸೌಲಭ್ಯವನ್ನು ಇಲಾಖಾವತಿಯಿಂದ ನೀಡಲಾಗುವುದಿಲ್ಲ. | | | |
| 08 | **ಅರ್ಜಿ ಸಲ್ಲಿಸುವ ವೆಬ್ ಸೈಟ್ ವಿಳಾಸ** | **www.sw.kar.nic.in** | |

| 09 | ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | **29.11.2023** |
|---|---|---|

| 10 | ಅಭ್ಯರ್ಥಿಗಳ ಗುರಿ | |
|---|---|---|

| ಸ್ಪರ್ಧಾತ್ಮಕ ಪರೀಕ್ಷೆ | ಅಭ್ಯರ್ಥಿಗಳ ಗುರಿ | |
|---|---|---|
| | ಪರಿಶಿಷ್ಟ ಜಾತಿ | ಪರಿಶಿಷ್ಟ ಪಂಗಡ |
| UPSC | 500 | 150 |
| KAS | 500 | 150 |
| Group- C | 600 | 250 |
| Banking | 600 | 250 |
| RRB | 600 | 250 |
| SSC | 600 | 250 |
| Judiciary Services | 100 | 50 |
| **Total** | **3500** | **1350** |

## ಸ್ಥಾನ ಹಂಚಿಕೆ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ :-

| ಕ್ರ.ಸಂ | ಮೀಸಲಾತಿ | ಶೇಕಡವಾರು | ಅರ್ಹರು | ಷರಾ |
|---|---|---|---|---|
| 1 | ಅಂಗವಿಕಲ / ವಿಕಲಚೇತನ | 4 | Right of Person with disabilities acts - 2016 ರಂತೆ ಸಕ್ಷಮ ಪ್ರಾಧಿಕಾರದಿಂದ ದಿವ್ಯಾಂಗ ಪ್ರಮಾಣ ಪತ್ರ ಹೊಂದಿದವರು. | ನಿಗಧಿತ ಸ್ಥಾನಕ್ಕೆ ಅರ್ಹ ದಿವ್ಯಾಂಗ ಅಭ್ಯರ್ಥಿಗಳು ದೊರೆಯದಿದ್ದರೆ, ಇತರೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳ ಆಯ್ಕೆಗೆ ಅವಕಾಶ ಕಲ್ಪಿಸಲಾಗುವುದು |
| 2 | ಹಾಸ್ಟೆಲ್ ವಿದ್ಯಾರ್ಥಿಗಳು | 10 | ಸಮಾಜ ಕಲ್ಯಾಣ ಇಲಾಖೆ, ಪರಿಶಿಷ್ಟ ಪಂಗಡಗಳ ನಿರ್ದೇಶನಾಲಯ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಹಾಗೂ ಅಲ್ಪ | ಸಂಬಂಧಪಟ್ಟ ವಿದ್ಯಾರ್ಥಿನಿಲಯದ ಮೇಲ್ವಿಚಾರಕರಿಂದ ನಮೂನೆ – A ರಲ್ಲಿ ವಿದ್ಯಾರ್ಥಿನಿಲಯದ ಅಭ್ಯರ್ಥಿ ಪ್ರಮಾಣ ಪತ್ರ ಪಡೆದಿರಬೇಕು. |

| | | | | |
|---|---|---|---|---|
| | | | ಸಂಖ್ಯಾತರ ಕಲ್ಯಾಣ ಇಲಾಖೆ, ಪ್ರಿಮೆಟ್ರಿಕ್ / ಪೋಸ್ಟ್ ಮೆಟ್ರಿಕ್ / ಆಶ್ರಮ ಶಾಲೆಯಲ್ಲಿ ಕನಿಷ್ಠ ಮೂರು ವರ್ಷ ನಿಲಯಾರ್ಥಿಗಳಾಗಿದ್ದ ವಿದ್ಯಾರ್ಥಿಗಳು. | |
| 3 | ವಸತಿ ಶಾಲೆಯ ವಿದ್ಯಾರ್ಥಿಗಳು | 10 | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆ ಮತ್ತು ಅಲ್ಪ ಸಂಖ್ಯಾತರ ಇಲಾಖೆ ಅಡಿ ಬರುವ ಮೊರಾರ್ಜಿ ದೇಸಾಯಿ/ ಕಿತ್ತೂರು ರಾಣಿ ಚೆನ್ನಮ್ಮ/ ಅಂಬೇಡ್ಕರ್ ವಸತಿ ಶಾಲೆಯಲ್ಲಿ ಕನಿಷ್ಠ 05 ವರ್ಷ ವಿದ್ಯಾಭ್ಯಾಸ ಮಾಡಿದ ಅಭ್ಯರ್ಥಿಗಳು. | ಸಂಬಂಧಪಟ್ಟ ವಸತಿ ಶಾಲಾ ಪ್ರಾಂಶುಪಾಲರಿಂದ 05 ವರ್ಷ ಅಧ್ಯಯನ ಮಾಡಿದ ಪ್ರಮಾಣ ಪತ್ರವನ್ನು ನಮೂನೆ – B ರಲ್ಲಿ ಪಡೆದಿರಬೇಕು. |
| 4 | ಮಹಿಳಾ ಅಭ್ಯರ್ಥಿಗಳು | 33 | ಮಹಿಳಾ ಮೀಸಲಾತಿಯಂತೆ | ನಿಗಧಿತ ಸಂಖ್ಯೆಯಲ್ಲಿ ಮಹಿಳಾ ಅಭ್ಯರ್ಥಿಗಳು ದೊರೆಯದಿದ್ದರೆ ಪುರುಷ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಅವಕಾಶವನ್ನು ಕಲ್ಪಿಸಲಾಗುತ್ತದೆ. |
| 5 | ಸೂಕ್ಷ್ಮ / ಅತಿ ಸೂಕ್ಷ್ಮ ಸಮುದಾಯ / ಸಫಾಯಿ ಕರ್ಮಚಾರಿ / | 5 | | ನಿಗಧಿತ ಸಂಖ್ಯೆಯಲ್ಲಿ ಸೂಕ್ಷ್ಮ / ಅತಿ ಸೂಕ್ಷ್ಮ / ಅಲೆಮಾರಿ ಸಮುದಾಯದ ಅಭ್ಯರ್ಥಿಗಳು ದೊರೆಯದಿದ್ದರೆ |

| | | | | |
|---|---|---|---|---|
| | ಸಮುದಾಯದ ಮಕ್ಕಳು | | | ಇತರೆ ಪರಿಶಿಷ್ಟ ಜಾತಿ /ಪಂಗಡದ ಅಭ್ಯರ್ಥಿಗಳಿಗೆ ಅವಕಾಶವನ್ನು ಕಲ್ಪಿಸಲಾಗುವುದು. |

## ಪರೀಕ್ಷಾ ವಿಧಾನ :-

| ಕ್ರ.ಸಂ | ವಿಷಯ | ಅಂಕಗಳು | ಸಮಯ | ಮಾಧ್ಯಮ | ಅವಧಿ |
|---|---|---|---|---|---|
| 1 | UPSC/KAS | 100 | 120 ನಿಮಿಷ | ಕನ್ನಡ/ ಇಂಗ್ಲೀಷ್ | ಬೆಳಿಗ್ಗೆ |
| 2 | Group-C / RRB / SSC / Banking | 100 | 120 ನಿಮಿಷ | ಕನ್ನಡ/ಇಂಗ್ಲೀಷ್ | ಮಧ್ಯಾಹ್ನ |

1. ಯು.ಪಿ.ಎಸ್.ಸಿ/ ಕೆ.ಎ.ಎಸ್. ಸ್ಪರ್ಧಾತ್ಮಕ ಪರೀಕ್ಷಗೆ ಇಲಾಖೆಯಿಂದ ಈಗಾಗಲೇ ತರಬೇತಿ ಪಡೆದ ಅಭ್ಯರ್ಥಿಗಳು ಪುನಃ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ. ಆದರೆ ಎಸ್.ಎಸ್.ಸಿ / ಆರ್.ಆರ್.ಬಿ / ಬ್ಯಾಂಕಿಂಗ್ ಮತ್ತು ಗ್ರೂಪ್-ಸಿ / ನ್ಯಾಯಾಂಗ ಸೇವೆ ಮೊದಲಾದ ಸ್ಪರ್ಧಾತ್ಮಕ ಪರೀಕ್ಷೆಗೆ ಇಲಾಖೆಯಿಂದ ತರಬೇತಿ ಪಡೆದ ಅಭ್ಯರ್ಥಿಗಳು ಯು.ಪಿ.ಎಸ್.ಸಿ/ ಕೆ.ಎ.ಎಸ್. ತರಬೇತಿಗೆ ಮಾತ್ರ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ. ಈಗಾಗಲೇ ಎಸ್.ಎಸ್.ಸಿ / ಆರ್.ಆರ್.ಬಿ/ ಬ್ಯಾಂಕಿಂಗ್ ಮತ್ತು ಗ್ರೂಪ್-ಸಿ ಸ್ಪರ್ಧಾತ್ಮಕ ಪರೀಕ್ಷೆಗೆ ತರಬೇತಿ ಪಡೆದ ಅಭ್ಯರ್ಥಿಗಳು ಪುನಃ ಗ್ರೂಪ್-ಸಿ/ ಆರ್.ಆರ್.ಬಿ./ ಎಸ್.ಎಸ್.ಸಿ ಮತ್ತು ಬ್ಯಾಂಕಿಂಗ್ ಪ್ರವೇಶ ಪರೀಕ್ಷೆಗೆ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.

## ಪ್ರವೇಶ ಪರೀಕ್ಷೆ ಪಠ್ಯಕ್ರಮ :-

- UPSC/ KAS ಈ ಎರಡು ಸ್ಪರ್ಧಾತ್ಮಕ ಪರೀಕ್ಷೆಗೆ ಒಂದೇ ಪ್ರವೇಶ ಪರೀಕ್ಷೆ ನಡೆಸಲಾಗುತ್ತದೆ. ಸದರಿ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಈ ಕೆಳಕಂಡ ಪಠ್ಯಕ್ರಮವನ್ನು ನಿಗಧಿಪಡಿಸಲಾಗಿರುತ್ತದೆ, UPSC ಅಥವಾ KAS ಯಾವುದಾದರು ಒಂದು ಸ್ಪರ್ಧಾತ್ಮಕ ಪರೀಕ್ಷೆಗೆ ಆಯ್ಕೆಯಾಗಲು ಅರ್ಹರಿರುತ್ತಾರೆ.

- Current events of national and international importance.
- History of India and Indian National movement.
- Indian and World Geography-Physical, Social, Economics Geography of India and the World.
- Indian polity and Governance-Constitution, Political System

- Economic and Social Development-sustainable Development, Poverty, Inclusion, demographics, social sector initiatives, etc.
- General issues on Environmental Ecology, Bio-diversity and Climate change-that do not require subject specialization General Science.
- Important Government programs/ Schemes
- Awards and Honours
- Comprehension
- Interpersonal skills including communication skills
- Logical reasoning and analytical ability
- Decision-making and problem solving
- General mental ability
- Basic numeracy (numbers and their relations, orders of magnitude, etc.,) (Class X level), Data Interpretation (charts, graphs, tables, data sufficiency etc.-class X level)
- Group-C/ Banking /RRB/SSC ಈ ನಾಲ್ಕು ಸ್ಪರ್ಧಾತ್ಮಕ ಪರೀಕ್ಷೆಗೆ ಒಂದೇ ಪ್ರವೇಶ ಪರೀಕ್ಷೆ ನಡೆಸಲಾಗುತ್ತದೆ. ಈ ಮೂರು ವರ್ಗದ ಸ್ಪರ್ಧಾತ್ಮಕ ಪರೀಕ್ಷೆಗೆ ಈ ಕೆಳಕಂಡ ಪಠ್ಯಕ್ರಮವನ್ನು ನಿಗಧಿಪಡಿಸಲಾಗಿರುತ್ತದೆ. Group-C/ Banking /RRB/SSC ಈ ನಾಲ್ಕರಲ್ಲಿ ಒಂದು ಸ್ಪರ್ಧಾತ್ಮಕ ಪರೀಕ್ಷೆಗೆ ಆಯ್ಕೆಯಾಗಲು ಅರ್ಹರಿರುತ್ತಾರೆ.

  1. Reasoning Ability Paper
  2. Quantitative Aptitude Paper
  3. English Language Paper

## ಅರ್ಜಿ ಸಲ್ಲಿಸುವಾಗ ಗಮನಿಸಬೇಕಾದ ಅಂಶಗಳು :-

**1. UPSC, KAS :-** ಸದರಿ ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿಗಾಗಿ 100 ಅಂಕಗಳಿಗೆ ಬೆಳಗಿನ ಅವಧಿಯಲ್ಲಿ ಒಂದು ಸಾಮಾನ್ಯ ಪ್ರವೇಶ ಪರೀಕ್ಷೆ ನಡೆಸಲಾಗುತ್ತದೆ. ಅಭ್ಯರ್ಥಿಯು ಅರ್ಜಿಯನ್ನು ಸಲ್ಲಿಸುವಾಗ ಈ ಎರಡರಲ್ಲಿ ಯಾವ ತರಬೇತಿಗೆ ಆಯ್ಕೆಯಾಗಲು ಬಯಸುತ್ತಾರೋ, ಅಂತಹ ಸ್ಪರ್ಧಾತ್ಮಕ ಪರೀಕ್ಷೆಯ ತರಬೇತಿಗೆ ಮಾತ್ರ ಅರ್ಜಿ ಸಲ್ಲಿಸಬೇಕು. ಅಭ್ಯರ್ಥಿಯು ನೊಂದಾಯಿಸಿದ ತರಬೇತಿಗೆ ಮಾತ್ರ ಪ್ರವೇಶ ಪತ್ರ ದೊರೆಯುತ್ತದೆ.

**2. Group-C, Banking, R.R.B, S.S.C :-** ಈ ನಾಲ್ಕು ಸ್ಪರ್ಧಾತ್ಮಕ ಪರೀಕ್ಷೆಗಳ ಆಯ್ಕೆಗಾಗಿ ಮಧ್ಯಾಹ್ನದ ಅವಧಿಯಲ್ಲಿ ಸಾಮಾನ್ಯ ಪ್ರವೇಶ ಪರೀಕ್ಷೆ ನಡೆಯುತ್ತದೆ.

**3.** ಅಭ್ಯರ್ಥಿಯು ಎರಡು ಅವಧಿಯ ಸಾಮಾನ್ಯ ಪ್ರವೇಶ ಪರೀಕ್ಷೆ ಬರೆಯಲು ಅರ್ಹರಿರುತ್ತಾರೆ.

**4.** ಒಬ್ಬ ಅಭ್ಯರ್ಥಿಯು U.P.S.C, K.A.S, ಈ ಎರಡರಲ್ಲಿ ಒಂದು ಸ್ಪರ್ಧಾತ್ಮಕ ಪರೀಕ್ಷೆಗೆ ಆಯ್ಕೆಯಾಗಬಹುದು ಅಥವಾ Group-C, Banking, RRB, SSC ಈ ನಾಲ್ಕರಲ್ಲಿ ಒಂದು ಸ್ಪರ್ಧಾತ್ಮಕ ಪರೀಕ್ಷೆಗೆ ಆಯ್ಕೆಯಾಗಬಹುದು.

**5**. ಅಭ್ಯರ್ಥಿಯು ಅರ್ಜಿ ಸಲ್ಲಿಸುವಾಗ ಯಾವ ಸ್ಪರ್ಧಾತ್ಮಕ ಪರೀಕ್ಷೆಗೆ ತರಬೇತಿ ಪಡೆಯಲು ಅರ್ಜಿಯಲ್ಲಿ ನಮೂದಿಸಿರುತ್ತಾರೋ ಆ ತರಬೇತಿಗೆ ಮಾತ್ರ ಪ್ರವೇಶ ಪತ್ರ ದೊರೆಯುತ್ತದೆ.

**6.** ಬೆಳಗಿನ ಅವಧಿಯಲ್ಲಿU.P.S.C, K.A.S ತರಬೇತಿಗಾಗಿ ಆಯ್ಕೆ ಮಾಡಲು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಗೆ ಹಾಗೂ ಮಧ್ಯಾಹ್ನದ ಅವಧಿಯಲ್ಲಿ Group-C Banking, R.R.B, S.S.C ತರಬೇತಿಯ ಆಯ್ಕೆಗಾಗಿ ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಗೆ ಹಾಜರಾಗಬಹುದು.

**7.** ಅಭ್ಯರ್ಥಿಯು ಎರಡು ಸಾಮಾನ್ಯ ಪ್ರವೇಶ ಪರೀಕ್ಷೆಯಲ್ಲಿ ಉತ್ತಮ ಅಂಕ ಪಡೆದರೆ, ಎರಡು ತರಬೇತಿಗೂ ಆಯ್ಕೆಯಾಗುತ್ತಾರೆ. ಆದರೆ ಅಂತಿಮವಾಗಿ ಅಭ್ಯರ್ಥಿಯು ಒಂದು ತರಬೇತಿಯನ್ನು ಪಡೆಯಲು ಮಾತ್ರ ಅರ್ಹರಿರುತ್ತಾರೆ.

## <u>ಗಮನದಲ್ಲಿಡಬೇಕಾದ ಅಂಶ :-</u>

- ಇಲಾಖಾ ವೆಬ್ ಸೈಟ್ ನಲ್ಲಿ ಕಾಲಕಾಲಕ್ಕೆ ನೀಡಲಾಗುವ ಮಾಹಿತಿಯು ಅಧಿಕೃತ ಹಾಗೂ ಅಂತಿಮವಾಗಿರುತ್ತದೆ.
- ಇಲಾಖಾ ವತಿಯಿಂದ ಯಾವುದೇ ಪತ್ರ ವ್ಯವಹಾರವನ್ನು ನಡೆಸಲಾಗುವುದಿಲ್ಲವಾದ್ದರಿಂದ, ಇಲಾಖಾ ವೆಬ್ ಸೈಟ್ ನ್ನು ಕಾಲಕಾಲಕ್ಕೆ ವೀಕ್ಷಿಸತಕ್ಕದ್ದು ಹಾಗೂ ವೆಬ್ ಸೈಟ್ ನಲ್ಲಿ ನೀಡಲಾದ ಸೂಚನೆಯಾನುಸಾರವಾಗಿ ಪ್ರವೇಶ ಪರೀಕ್ಷಾ ಪತ್ರ ಡೌನ್ ಲೋಡ್ ಮಾಡಿಕೊಂಡು, ಸಾಮಾನ್ಯ ಪ್ರವೇಶ ಪರೀಕ್ಷೆಗೆ, ತರಬೇತಿ ಸಂಸ್ಥೆಯ ಆಯ್ಕೆ ಹಾಗೂ ಮೂಲ ದಾಖಲೆಗಳ ಪರಿಶೀಲನೆಗೆ ಹಾಜರಾಗುವುದು.
- ತಪ್ಪು ಮಾಹಿತಿಯ ಕಾರಣದಿಂದ ಉಂಟಾಗಬಹುದಾದ ಲೋಪಗಳಿಗೆ ಸಂಬಂಧಪಟ್ಟ ಅಭ್ಯರ್ಥಿಗಳೇ ಜವಾಬ್ದಾರರಾಗಿರುತ್ತಾರೆ.

- ನಿಗಧಿತ ದಿನಾಂಕದಂದು ಪ್ರವೇಶ ಪರೀಕ್ಷೆ, ಕೌನ್ಸಿಲಿಂಗ್, ಮೂಲ ದಾಖಲೆಗಳ ಪರಿಶೀಲನೆಗೆ ಹಾಜರಾಗದಿದ್ದಲ್ಲಿ ಅಂತಹ ಅಭ್ಯರ್ಥಿಗಳನ್ನು, ಆಯ್ಕೆಗೆ ಪರಿಗಣಿಸುವುದಿಲ್ಲ. ಇಂತಹ ನಿರ್ಲಕ್ಷಕ್ಕೆ ಅಭ್ಯರ್ಥಿಗಳೇ ನೇರ ಹೊಣೆಗಾರರಾಗಿರುತ್ತಾರೆ.

ಸಹಿ/-
ಅಪರ ನಿರ್ದೇಶಕರು,
ಪರೀಕ್ಷಾ ಪೂರ್ವ ತರಬೇತಿ ಕೇಂದ್ರ,
ಬೆಂಗಳೂರು.